# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1574
2. ಸದಸ್ಯರ ಹೆಸರು : ಶ್ರೀಮತಿ ಎಸ್.ವೀಣಾ ಅಚ್ಚಯ್ಯ
3. ಉತ್ತರಿಸಬೇಕಾದ ದಿನಾಂಕ : 18-03-2021

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ಕೊಡಗು ಜಿಲ್ಲೆಯ ಭಾಗಮಂಡಲದಲ್ಲಿ ಕಾವೇರಿ ನೀರಾವರಿ ನಿಗಮದ ವತಿಯಿಂದ ನಿರ್ಮಾಣಗೊಳ್ಳುತ್ತಿರುವ ಮೇಲುಸೇತುವೆ ನಿರ್ಮಾಣ ಕಾರ್ಯ ಆರಂಭಗೊಂಡು ಎರಡು ವರ್ಷ ಕಳೆದಿದ್ದರೂ, ಕಾಮಗಾರಿ ಇದುವರೆಗೂ ಪೂರ್ಣಗೊಳ್ಳದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೊಡಗು ಜಿಲ್ಲೆಯ ಭಾಗಮಂಡಲದಲ್ಲಿ ಮೇಲ್ಸೇತುವೆ ನಿರ್ಮಾಣ ಕಾಮಗಾರಿಯ ಸ್ಥಳದಲ್ಲಿ ಭೂಸ್ವಾಧೀನ, ವಿದ್ಯುತ್ ಕಂಬಗಳ ಸ್ಥಳಾಂತರ, ಅರಣ್ಯ ಇಲಾಖೆಯ ಗಿಡಮರಗಳನ್ನು ತೆರವುಗೊಳಿಸಲು ವಿಳಂಬವಾಗಿದ್ದರಿಂದ, 2018 ಮತ್ತು 2019 ರ ಸಾಲುಗಳಲ್ಲಿ ಹೆಚ್ಚಿನ ಮಳೆಯಿಂದಾಗಿ ಹಾಗೂ 2020 ರಲ್ಲಿ ದೇಶಾದ್ಯಂತ ಲಾಕ್‌ಡೌನ್ ವಿಧಿಸಲಾಗಿದ್ದರಿಂದ ಕಾಮಗಾರಿಯು ವಿಳಂಬವಾಗಿರುತ್ತದೆ. |
| ಆ | ಬಂದಿದ್ದಲ್ಲಿ, ಕಾಮಗಾರಿಯ ಅಂದಾಜು ಮೊತ್ತ, ಇಲ್ಲಿಯವರೆಗೆ ವಿನಿಯೋಗಿಸಿರುವ ಅನುದಾನದ ವಿವರಗಳೇನು; ಹಾಗೂ ಕಾಮಗಾರಿಯನ್ನು ಪೂರ್ಣ ಮಾಡಲು ಬೇಕಾದ ಉಳಿಕೆ ಹಣ ಪ್ರಸ್ತುತ ಲಭ್ಯ ಇದೆಯೇ; | ಕೊಡಗು ಜಿಲ್ಲೆಯ ಭಾಗಮಂಡಲದ ಹತ್ತಿರ ಮಡಿಕೇರಿ-ತಲಕಾವೇರಿ ಮತ್ತು ನಾಪೊಕ್ಲು-ತಲಕಾವೇರಿ ರಸ್ತೆಗಳ ಛೇದಕದಲ್ಲಿ ಕಾವೇರಿ ನದಿಗೆ ಅಡ್ಡಲಾಗಿ ಮೇಲ್ಸೇತುವೆ ನಿರ್ಮಿಸುವ ಕಾಮಗಾರಿಯನ್ನು ರೂ.29.62 ಕೋಟಿಗಳ ವೆಚ್ಚದಲ್ಲಿ ಕೈಗೊಳ್ಳಲಾಗಿದ್ದು, ಸದರಿ ಕಾಮಗಾರಿಗೆ ನಿಗದಿಪಡಿಸಿರುವ ಅನುದಾನ ಹಾಗೂ ವೆಚ್ಚದ ವಿವರ ಕೆಳಕಂಡಂತಿದೆ :<br>*(ರೂ ಕೋಟಿಗಳಲ್ಲಿ)*<br>ಕ್ರ.ಸಂ / ವರ್ಷ / ಅನುದಾನ / ವೆಚ್ಚ<br>1 / 2017-18 / 5.00 / -<br>2 / 2018-19 / 3.00 / 1.52<br>3 / 2019-20 / 3.00 / 4.14<br>4 / 2020-21 (ಇಲ್ಲಿಯವರೆಗೆ) / 1.00 / 4.53<br>ಒಟ್ಟು :- / **12.00** / **10.19**<br>ಸದರಿ ಕಾಮಗಾರಿಗೆ ಅಗತ್ಯವಿರುವ ಅನುದಾನವನ್ನು ಒದಗಿಸಿಕೊಂಡು ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮ ವಹಿಸಲಾಗುವುದು. |
| ಇ | ಮಳೆಗಾಲದಲ್ಲಿ ದ್ವೀಪದಂತಾಗುವ ಭಾಗಮಂಡಲದಲ್ಲಿ ಸಾರ್ವಜನಿಕರಿಗೆ ಹಾಗೂ ಭಕ್ತಾದಿಗಳಿಗೆ ಆಗುತ್ತಿರುವ ತೊಂದರೆಯನ್ನು ನಿವಾರಿಸುವ ಸಲುವಾಗಿ ಯಾವ ಕಾಲಮಿತಿಯೊಳಗೆ ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು? | ಪ್ರಸ್ತುತ ಕಾಮಗಾರಿಯು ಪ್ರಗತಿಯಲ್ಲಿದ್ದು, ಜೂನ್-2022 ರೊಳಗೆ ಪೂರ್ಣಗೊಳಿಸಲು ಕ್ರಮ ವಹಿಸಲಾಗುವುದು. |

*ಸಂಖ್ಯೆ:ಜಸಂಇ 61 ಎನ್‌ಎಲ್‌ಎ 2021*

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ